# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೂಡಿ ಉಪವಿಭಾಗ, ಬೆಂಗಳೂರು-48.

ಸಂ:ಬಿಬಿಎಂಪಿ/ಸಕಾಅ/ಹೂಉವಿ/63/2022-23 ದಿನಾಂಕ:05.11.2022

**-:ದಿನಾಂಕ:25.10.2022 ರಂದು ನಡೆದ 54-ಹೂಡಿ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು:-**

ಮಾನ್ಯ ಆಯುಕ್ತರವರ ಆದೇಶದ ದಿನಾಂಕ:21-09-2020ರ ಮೇರೆಗೆ ವಾರ್ಡ್ ಸಮಿತಿಯನ್ನು ರಚಿಸಲಾಗಿದ್ದು, ದಿನಾಂಕ:05.11.2022 ರ ಶನಿವಾರ ಬೆಳಗ್ಗೆ 11.00 ಕ್ಕೆ ವಾರ್ಡ್ ನಂ.105 ಬೆಳತ್ತೂರು ಮತ್ತು ವಾರ್ಡ್ ನಂ.106 ಹೂಡಿ, ಹೂಡಿ ಕಾಮಗಾರಿ ಕಛೇರಿಯಲ್ಲಿ ವಾರ್ಡ್ ಮಟ್ಟದ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಲಾಯಿತು. ಸಭೆಯ ಅಧ್ಯಕ್ಷರಾದ ನೋಡಲ್ ಅಧಿಕಾರಿಗಳೂ ಸಭೆಯನ್ನು ಪ್ರಾರಂಭಿಸಿ ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳಿಗೂ ಹಾಗೂ ಸ್ಥಳೀಯ ಸಂಘ ಸಂಸ್ಥೆಯವರಿಗೆ ಸ್ವಾಗತ ಕೋರಿದ್ದು, ಸಭೆಯನ್ನು ಪ್ರಾರಂಭಿಸಿದರು.

**ಸಭೆಗೆ ಹಾಜರಿದ್ದವರು:-**

| ಕ್ರ.ಸಂ | ಹಾಜರಿದ್ದವರ ಹೆಸರು | ಪದನಾಮ ಅಥವಾ ಇಲಾಖೆ | ಹಾಜರಾತಿ |
|---|---|---|---|
| 1 | ಶ್ರೀ.ಶ್ರೀನಿವಾಸ್ ಮೂರ್ತಿ. | ಅಧ್ಯಕ್ಷರು ವಾರ್ಡ್ ನೋಡಲ್ ಅಧಿಕಾರಿಗಳು ಹಾಗೂ ಸ.ಕಾ.ಅ. ಹೂಡಿ ಉಪವಿಭಾಗ | |
| 2 | ಶ್ರೀ.ಎಂ.ಜಗದೀಶ್ | ಕಾರ್ಯದರ್ಶಿಗಳು ವಾರ್ಡ್ ಎ.ಇ. ವಾರ್ಡ್.ನಂ-54 | ಹಾಜರಿದ್ದರು. |
| 3 | ಶ್ರೀ.ಎ.ವೀರಪ್ಪ | ಕಿರಿಯ ಆರೋಗ್ಯ ಪರಿವೀಕ್ಷಕರು, | ಹಾಜರಿದ್ದರು. |
| 4 | ಶ್ರೀ.ಸತೀಶ್ | ಅಯ್ಯಪ್ಪನಗರ | ಹಾಜರಿದ್ದರು. |
| 5 | ಶ್ರೀ.ಶಂಕರ್ | | ಹಾಜರಿದ್ದರು. |
| 6 | ಶ್ರೀ.ಮಹೇಂದ್ರ ಪ್ರಸಾದ್ | ಕೊಡಿಗೇಹಳ್ಳಿ | ಹಾಜರಿದ್ದರು. |
| 7 | ಶ್ರೀ.ವಿವೇಕ್ | ಬೆಳತ್ತೂರು | ಹಾಜರಿದ್ದರು. |
| 8 | ಶ್ರೀ.ಶ್ರೀರಾಮಮೂರ್ತಿ | ಬೆಳತ್ತೂರು | ಹಾಜರಿದ್ದರು. |
| 9 | ಶ್ರೀಮತಿ.ನರಸಮ್ಮ (ನಳಿನಿ) | SWM Sup. | ಹಾಜರಿದ್ದರು. |
| 10 | ಶ್ರೀ. ಶೇಖರ್ | | ಹಾಜರಿದ್ದರು. |
| 11 | ಶ್ರೀಮತಿ.ಜೀಬಿ | | ಹಾಜರಿದ್ದರು. |

Scanned with CamScanner

**ಸಭೆಯ ನಡುವಳಿಗಳು:-**

- ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ-54 ರವರು ಸಭೆಗೆ ಬಂದಿರುವ ವಾರ್ಡ್ ಸದಸ್ಯರಿಗೆ, ಅಧಿಕಾರಿ/ನೌಕರರುಗಳಿಗೆ ಸ್ವಾಗತಾ ಕೋರಿಸಭೆ ನಡೆಸಿಕೊಡುವಂತೆ ಕೊರಿದರು.
- ಅಧ್ಯಕ್ಷರು ಈ ಹಿಂದೆ ನಡೆದ ವಾರ್ಡ್ ಸಮಿತಿ ಸಭೆಯಲ್ಲಿ ತಿರ್ಮಾನಗಳನ್ನು ಕೈಗೊಂಡಿರುವ ಬಗ್ಗೆ ಅಧಿಕಾರಿ/ನೌಕರರು ಚರ್ಚಿಸಲಾಯಿತ್ತು ಹಾಗೂ ಕ್ರಮವಹಿಸಲು ಸೂಚಿಸಲಾಯಿತ್ತು.
- ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ಮುಂದಿನ ಸಭೆಗಳಿಗೆ ತಪ್ಪದೇ ಹಾಜರಾಗಲು ಸೂಚಿಸಲಾಯಿತು ಹಾಗೂಮುಂದಿನ ಸಭೆಯಲ್ಲಿ ಗೈರುಹಾಜರಾದಲ್ಲಿ ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗುವುದು ಎಂದು ತಿಳಿಸಿದರು.

**ಕಾಮಗಾರಿ ಇಲಾಖೆ**

1) ಬೆಳತ್ತೂರು ಗ್ರಾಮದಲ್ಲಿ ರಾಯಲ್ ಮಾರ್ಟ್ ಹಿಂಭಾಗದಲ್ಲಿ ರಾಜಕಾಲುವೆಯ ಸಮಸ್ಯೆ ಮತ್ತು ರಸ್ತೆಯಲ್ಲಿ ನೀರು ಬರುತ್ತದೆ, ರಸ್ತೆಯಲ್ಲಿ ಕೆಲಸ ನಡೆಯುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತದೆ ಹಾಗೂ ಜನರಿಗೆ ಯಾವುದೇ ತೊಂದರೆಯಾಗದಂತೆ ಬೇರೆ ಮಾರ್ಗವನ್ನು ಮಾಡಿಕೊಡಬೇಕೆಂದು ನವೀನ್ ಸಭೆಯಲ್ಲಿ ತಿಳಿಸಿದರು.
   (ಕ್ರಮ. ಎಇ. ಎಇಇ )
2) ಬಸವಣ್ಣನಗರ ಗಿಡ್ಡನ ಕೆರೆಯ ಕಾಲುವೆ ಸರಿಪಡಿಸುವಂತೆ ಸಭೆಯಲ್ಲಿ ಜೀಬಿಯವರು ತಿಳಿಸಿದರು. ರವಿಕುಮಾರ್‌ರವರನ್ನು ಮುಂದಿನ ಸಭೆಗೆ ಬರುವಂತೆ ಅಧ್ಯಕ್ಷರು ತಿಳಿಸಿದರು.
   (ಎಇ. **ಬಿ.ಡಬ್ಲ್ಯೂ.ಎಸ್,ಎಸ್.ಬಿ**)

**ಬೀದಿ ದೀಪ ಹಾಗೂ ಬೆಸ್ಕಾಂ**

1) ಬಿಳೆಶೀವಾಲೆಯಲ್ಲಿ ಸ್ಟ್ರೀಟ್ ಲೈಟ್ ಸಮಸ್ಯೆ ಇದೆ ಹಾಗೂ ಸರಿಯಾಗಿ ಬೀದಿ ದೀಪಗಳು ಉರಿಯುತ್ತಲ್ಲ ಎಂದು ಶಂಕರ್‌ರವರು ಸಭೆಯಲ್ಲಿ ತಿಳಿಸಿದರು. (ಕ್ರಮ. ಶರತ್ ಕುಮಾರ್ ಇಇ ವಿದ್ಯುತ್)
2) ಕೊಡಿಗೇಹಳ್ಳಿ ಪ್ರಸಾದ್ ರವರು, ಕೊಡಿಗೇಹಳ್ಳಿಯಲ್ಲಿ ಸರಿಯಾಗಿ ಬೀದಿ ದೀಪಗಳು ಉರಿಯುತ್ತಲ್ಲ ಎಂದು ಶಂಕರ್‌ರವರು ಸಭೆಯಲ್ಲಿ ತಿಳಿಸಿದರು. (ಕ್ರಮ. ಶರತ್ ಕುಮಾರ್ ಇಇ ವಿದ್ಯುತ್)
3) ಬೆಳತ್ತೂರು ನವೀನ್ ರವರು, 2ನೇ ಮೈನ್ ರೋಡ್ ಹಿಂಭಾಗ, ಬೆಳತ್ತೂರು ಮುಖ್ಯ ರಸ್ತೆಯಲ್ಲಿ ಸ್ಟ್ರೀಟ್ ಲೈಟ್‌ಗಳನ್ನು ಸರಿಪಡಿಸುವಂತೆ ತಿಳಿಸಿದರು. (ಕ್ರಮ. ಶರತ್ ಕುಮಾರ್ ಇಇ ವಿದ್ಯುತ್)

**ಕಲ್ಯಾಣ ಇಲಾಖೆ**

1) ಸಮಾಜ ಕಲ್ಯಾಣ ಇಲಾಖೆಯಲ್ಲಿ ಯಾವುದೇ ಸೌಲಭ್ಯಗಳು ದೊರೆಯುತ್ತಿಲ್ಲ ಎಂದು ನಳಿನಿ ಯವರು ಸಭೆಯಲ್ಲಿ ತಿಳಿಸಿದರು.

Scanned with CamScanner

2) ಸಮಾಜ ಕಲ್ಯಾಣ ಇಲಾಖೆಯಿಂದ ಲತಾ ರವರು ಕಂಪ್ಯೂಟರ್ ಮತ್ತು ಇತರೆ ಸೌಲಭ್ಯಗಳು ಇವೆ ಎಂದು ಸಭೆಯಲ್ಲಿ ಮಾಹಿತಿಗಳನ್ನು ತಿಳಿಸಿದರು ಮತ್ತು ಅರ್ಜಿಯನ್ನು ಹಾಕಲು ಸಾರ್ವಜನಿಕರಿಗೆ ತಿಳಿಸಿ ಎಂದು ಸಭೆಯಲ್ಲಿ ತಿಳಿಸಿದರು. ( ಸಮಾಜ ಕಲ್ಯಾಣ ಇಲಾಖೆ)

**ಘನತ್ಯಾಜ್ಯ ನಿರ್ವಹಣೆ**

1) ಬಿಳಿಶೀವಾಲೆಯಲ್ಲಿ ಪೌರಕಾರ್ಮಿಕರು ಇರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು ಮತ್ತು ಸ್ವಚ್ಛ ಮಾಡುವಂತೆ ತಿಳಿಸಿದರು.
2) ಬಿಳೆಶೀವಾಲೆ ರಸ್ತೆಯಲ್ಲಿ ಹಸುಗಳು ಓಡಾಡುವುದರಿಂದ ತುಂಬಾ ಸಮಸ್ಯೆಯಾಗುತ್ತದೆ ತಿಳಿಸಿದರು ಹಾಗೂ ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ತಿಳಿಸಿದರು.
3) ಕೊಡಿಗೇಹಳ್ಳಿ ರಸ್ತೆಯಲ್ಲಿ ಹಸುಗಳು ಓಡಾಡುವುದರಿಂದ ತುಂಬಾ ಸಮಸ್ಯೆಯಾಗುತ್ತದೆ ತಿಳಿಸಿದರು ಹಾಗೂ ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ತಿಳಿಸಿದರು.

**ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

ಮುಂಜಾಗ್ರತಾ ಕ್ರಮವಾಗಿ ಸಭೆ ಸಮಾರಂಭ ಮಾಡದಂತೆ ತಿಳಿಸಲಾಯಿತ್ತು ಹಾಗೂ ವ್ಯಾಕ್ಸಿನ್‌ನೇಶನ್ ಹಾಕಿಸಲು ಸ್ಥಳಿಯರಿಗೆ ಮುಂಜಾಗ್ರತೆ ವಹಿಸಿ ಕ್ರಮಕೈಗೊಳ್ಳಲು ತಿಳಿಸಿದರು.

Covid-19, ವ್ಯಾಕ್ಸಿನೇಷನ್, Contact Tracing ಮತ್ತು Testing ಮಾಡುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ಮುಂದಿನ ಸಭೆಗಳಿಗೆ ತಪ್ಪದೇ ಹಾಜರಾಗಲು ಸೂಚಿಸಲಾಯಿತು. ಸಮಿತಿ ಸಭೆಗೆ ಆಗಮಿಸಿದ ಎಲ್ಲಾ ಅಧಿಕಾರಿಗಳಿಗೂ ಹಾಗೂ ಸಂಘ ಸಂಸ್ಥೆಯ ಸದಸ್ಯರಿಗೂ ನೋಡಲ್ ಅಧಿಕಾರಿಗಳಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ನೊಡಲ್ ಅಧಿಕಾರಿ ಹಾಗೂ
ಸ.ಕಾ.ಅ. ಹೂಡಿ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಮಹದೇವಪುರ ವಲಯ

ವಾರ್ಡ್ ಸಮಿತಿ ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ–54 ಹೂಡಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಮಹದೇವಪುರ ವಲಯ

Scanned with CamScanner